# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 214 (215) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 18-08-2026 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೃಷಿ ಇಲಾಖೆಯಲ್ಲಿ ಕೃಷಿ ಅಧಿಕಾರಿ (AO) ಮತ್ತು ಸಹಾಯಕ ಕೃಷಿ ಅಧಿಕಾರಿ (AAO) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಮೂಲ ಕೃಷಿ ಪದವೀಧರರನ್ನು ಹೊರತುಪಡಿಸಿ, ಇತರ ತಾಂತ್ರಿಕ ಇಂಜಿನಿಯರಿಂಗ್ (ಉದಾಹರಣೆಗೆ: ರೈ-ಟೆಕ್, ಬಯೋಟೆಕ್ನಾಲಜಿ ಇತ್ಯಾದಿ) ಅಭ್ಯರ್ಥಿಗಳಿಗೆ ಅವಕಾಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಅವೈಜ್ಞಾನಿಕ ವೃಂದ ಮತ್ತು ನೇಮಕಾತಿ (C&R) ನಿಯಮಗಳಿಂದ ಮೂಲ ಕೃಷಿ ಪದವೀಧರರಿಗೆ ಉದ್ಯೋಗಾವಕಾಶದಲ್ಲಿ ಆಗುತ್ತಿರುವ ಅನ್ಯಾಯವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಕೃಷಿ ಇಲಾಖೆಯಲ್ಲಿ ಕೃಷಿ ಅಧಿಕಾರಿ (AO) ಮತ್ತು ಸಹಾಯಕ ಕೃಷಿ ಅಧಿಕಾರಿ (AAO) ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ಮೂಲ ಕೃಷಿ ಪದವೀಧರರನ್ನು ಹೊರತುಪಡಿಸಿ, ಇತರ ತಾಂತ್ರಿಕ ಇಂಜಿನಿಯರಿಂಗ್ (ಉದಾಹರಣೆಗೆ: ರೈ-ಟೆಕ್, ಬಯೋಟೆಕ್ನಾಲಜಿ ಇತ್ಯಾದಿ) ಅಭ್ಯರ್ಥಿಗಳಿಗೆ ಅವಕಾಶ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ದಿನಾಂಕ:06.08.2026ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪತ್ರ ಬರೆದು ನೇಮಕಾತಿ ಅಧಿಸೂಚನೆ ದಿನಾಂಕ:30.05.2026 ಅನ್ನು ಹಿಂಪಡೆಯಲು ಸೂಚಿಸಲಾಗಿರುತ್ತದೆ. ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ ದಿನಾಂಕ: 07.08.2026ರಂದು ಅಧಿಸೂಚನೆ ಹೊರಡಿಸಿ ದಿನಾಂಕ:30.05.2026ರ ನೇಮಕಾತಿ ಅಧಿಸೂಚನೆಯನ್ನು ಹಿಂಪಡೆದು ದಿನಾಂಕ 08.08.2026 ಮತ್ತು 09.08.2026ರಂದು ನಿಗದಿಪಡಿಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಮುಂದೂಡಿರುತ್ತದೆ.<br><br>ಪ್ರಸ್ತುತ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದ ಹುದ್ದೆಗಳಿಗೆ ನಿಗದಿಪಡಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳು-2021ರ ಬಗ್ಗೆ ಹಲವು ಕೃಷಿ ಪದವೀಧರ ವಿದ್ಯಾರ್ಥಿಗಳು ಮನವಿ/ ಆಕ್ಷೇಪಣೆಗಳು ಸ್ವೀಕೃತವಾಗಿರುವ ಹಿನ್ನೆಲೆಯಲ್ಲಿ, ಕೃಷಿ ಇಲಾಖೆಯ (ವೃಂದ ಮತ್ತು ನೇಮಕಾತಿ) ನಿಯಮಾವಳಿ 2021ನ್ನು ಪರಿಷ್ಕರಿಸಲು ಈ |

<table>
<tr><td></td><td></td><td>ಕೆಳಕಂಡಂತೆ ಸಲಹಾ ಸಮಿತಿ ರಚಿಸಿ ಸರ್ಕಾರಕ್ಕೆ ವರದಿ ನೀಡುವಂತೆ ಆದೇಶಿಸಲಾಗಿರುತ್ತದೆ.
<table>
<tr><td>1.</td><td>ಕೃಷಿ ಆಯುಕ್ತರು</td><td>ಸಮಿತಿ ಅಧ್ಯಕ್ಷರು</td></tr>
<tr><td>2.</td><td>ಕುಲಪತಿಗಳು,<br>ಕೃಷಿ ವಿಶ್ವವಿದ್ಯಾಲಯ,<br>ಬೆಂಗಳೂರು</td><td>ಸದಸ್ಯರು</td></tr>
<tr><td>3.</td><td>ಕುಲಪತಿಗಳು,<br>ಕೃಷಿ ವಿಶ್ವವಿದ್ಯಾಲಯ,<br>ಧಾರವಾಡ</td><td>ಸದಸ್ಯರು</td></tr>
<tr><td>4.</td><td>ಕೃಷಿ ನಿರ್ದೇಶಕರು</td><td>ಸಮಿತಿಯ ಸದಸ್ಯ ಕಾರ್ಯದರ್ಶಿಗಳು</td></tr>
</table>
ಸಮಿತಿಯ ವರದಿಯನ್ವಾಧರಿಸಿ ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ (C&R) ನಿಯಮಗಳು, 2021ನ್ನು ಪರಿಶೀಲಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಪರಿಷ್ಕರಿಸಲು ಕ್ರಮವಹಿಸಲಾಗುವುದು.</td></tr>
<tr><td>ಆ</td><td>ರಾಜ್ಯದಲ್ಲಿ ಸರ್ಕಾರಿ ಕೃಷಿ ವಿಶ್ವವಿದ್ಯಾಲಯಗಳಿದ್ದರೂ, ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಮತ್ತು ಕೃಷಿ ಶಿಕ್ಷಣದ ಖಾಸಗೀಕರಣಕ್ಕೆ ಸರ್ಕಾರ ಮುಕ್ತ ಅನುಮತಿ ನೀಡುತ್ತಿದೆಯೇ; ಇದರಿಂದಾಗಿ ಕೃಷಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಮತ್ತು ಕೃಷಿ ಶಿಕ್ಷಣವು ಉದ್ಯಮವಾಗಿ ಮಾರ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದಲ್ಲಿ ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಗೆ ಸರ್ಕಾರದಿಂದ ಅನುಮತಿ ನೀಡಲಾಗುತ್ತಿದೆ.<br>ಖಾಸಗಿ ಕೃಷಿ ಕಾಲೇಜುಗಳ ಸ್ಥಾಪನೆಯಿಂದ ಕೃಷಿ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಮತ್ತು ಕೃಷಿ ಶಿಕ್ಷಣವು ಉದ್ಯಮವಾಗಿ ಮಾರ್ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.</td></tr>
<tr><td>ಇ</td><td>ಕೃಷಿ ಶಿಕ್ಷಣವನ್ನು ರಕ್ಷಿಸಲು ಮತ್ತು ಖಾಸಗಿ ಕಾಲೇಜುಗಳ ಹಾವಳಿಯನ್ನು ತಡೆಗಟ್ಟಲು ಸರ್ಕಾರ ಯಾವುದೇ ಕಟ್ಟುನಿಟ್ಟಿನ ನಿಯಮಾವಳಿ ಅಥವಾ ನೀತಿಯನ್ನು ರೂಪಿಸಿದೆಯೇ; ಇಲ್ಲದಿದ್ದಲ್ಲಿ, ರಾಜ್ಯದ ಸರ್ಕಾರಿ ಕೃಷಿ ವಿವಿಗಳ ವಿದ್ಯಾರ್ಥಿಗಳ ಹಿತರಕ್ಷಣೆಗಾಗಿ ಖಾಸಗಿ ಕೃಷಿ ಕಾಲೇಜುಗಳಿಗೆ ನೀಡಿರುವ ಅನುಮತಿಯನ್ನು ರದ್ದುಪಡಿಸುವ ಆಲೋಚನೆ ಸರ್ಕಾರದ ಮುಂದಿದೆಯೆ;</td><td>ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ 2009ರಲ್ಲಿ ಖಾಸಗಿ ಕೃಷಿ ಮಹಾವಿದ್ಯಾಲಯಗಳನ್ನು ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಅಧಿನಿಯಮದಂತೆ ಸರ್ಕಾರವು ಖಾಸಗಿ ಕೃಷಿ ಮಹಾವಿದ್ಯಾಲಯಗಳನ್ನು ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.<br><br>ರಾಜ್ಯದ ಸರ್ಕಾರಿ ಕೃಷಿ ವಿಶ್ವವಿದ್ಯಾಲಯಗಳ ವಿದ್ಯಾರ್ಥಿಗಳ ಹಿತವನ್ನು ಸರ್ಕಾರವು ರಕ್ಷಣೆ ಮಾಡುತ್ತಿದ್ದು, ಖಾಸಗಿ ಕೃಷಿ ಕಾಲೇಜುಗಳಿಗೆ ನೀಡಿರುವ ಅನುಮತಿಯನ್ನು ರದ್ದುಪಡಿಸುವ ಆಲೋಚನೆ ಪ್ರಸ್ತುತ ಹಂತದಲ್ಲಿ ಸರ್ಕಾರದ ಮುಂದೆ ಇರುವುದಿಲ್ಲ.</td></tr>
</table>

<table>
<tr>
<td>ಈ</td>
<td>ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಲ್ಲಿ ಖಾಲಿ ಇರುವ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ಮತ್ತು ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು: ಕೃಷಿ ಪದವೀಧರರ ನಿರುದ್ಯೋಗ ಸಮಸ್ಯೆಯನ್ನು ನಿವಾರಿಸಲು ಪ್ರತಿ ವರ್ಷ ನಿಯಮಿತವಾಗಿ ನೇಮಕಾತಿ ಪ್ರಕ್ರಿಯೆ ನಡೆಸಲು ಸರ್ಕಾರ ಕಾಲಮಿತಿ ಯೋಜನೆಯನ್ನು ಹೊಂದಿದೆಯೇ?</td>
<td>ಕಳೆದ ಮೂರು ವರ್ಷಗಳಲ್ಲಿ ಯಾವುದೇ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿರುವುದಿಲ್ಲ. ಪ್ರಸ್ತುತ ಕೃಷಿ ಇಲಾಖೆಯಲ್ಲಿ ಒಟ್ಟು 5738 ವಿವಿಧ ಹುದ್ದೆಗಳು ಖಾಲಿ ಇರುತ್ತವೆ.<br><br>ಪ್ರಸ್ತುತ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ನಿಗದಿಪಡಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳು-2021ರ ಬಗ್ಗೆ ಹಲವು ಕೃಷಿ ಪದವೀಧರ ವಿದ್ಯಾರ್ಥಿಗಳಿಂದ ಮನವಿ/ ಆಕ್ಷೇಪಣೆಗಳು ಸ್ವೀಕೃತವಾಗಿರುವ ಹಿನ್ನೆಲೆಯಲ್ಲಿ, ಕೃಷಿ ಇಲಾಖೆಯ (ವೃಂದ ಮತ್ತು ನೇಮಕಾತಿ) ನಿಯಮಾವಳಿ 2021ನ್ನು ಪರಿಷ್ಕರಿಸಲು ಈ ಕೆಳಕಂಡಂತೆ ಸಲಹಾ ಸಮಿತಿ ರಚಿಸಿ ಸರ್ಕಾರಕ್ಕೆ ವರದಿ ನೀಡುವಂತೆ ಆದೇಶಿಸಲಾಗಿರುತ್ತದೆ.
<table>
<tr><td>1</td><td>ಕೃಷಿ ಆಯುಕ್ತರು</td><td>ಸಮಿತಿ ಅಧ್ಯಕ್ಷರು</td></tr>
<tr><td>2</td><td>ಕುಲಪತಿಗಳು,<br>ಕೃಷಿ ವಿಶ್ವವಿದ್ಯಾಲಯ,<br>ಬೆಂಗಳೂರು</td><td>ಸದಸ್ಯರು</td></tr>
<tr><td>3</td><td>ಕುಲಪತಿಗಳು,<br>ಕೃಷಿ ವಿಶ್ವವಿದ್ಯಾಲಯ,<br>ಧಾರವಾಡ</td><td>ಸದಸ್ಯರು</td></tr>
<tr><td>4</td><td>ಕೃಷಿ ನಿರ್ದೇಶಕರು</td><td>ಸಮಿತಿಯ ಸದಸ್ಯ ಕಾರ್ಯದರ್ಶಿಗಳು</td></tr>
</table>
ಸಮಿತಿಯ ವರದಿಯನ್ನಾಧರಿಸಿ ಕೃಷಿ ಇಲಾಖೆಯ ವೃಂದ ಮತ್ತು ನೇಮಕಾತಿ (C&R) ನಿಯಮಗಳು 2021ನ್ನು ಪರಿಶೀಲಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆಯೊಂದಿಗೆ ಪರಿಷ್ಕರಿಸಿದ ನಂತರ ಕೃಷಿ ಅಧಿಕಾರಿ ವೃಂದದ 128 ಹುದ್ದೆಗಳು ಹಾಗೂ ಸಹಾಯಕ ಕೃಷಿ ಅಧಿಕಾರಿ ವೃಂದದ 817 ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು.</td>
</tr>
</table>

**ಸಂಖ್ಯೆ:AGRI 289 AGS 2026**

**(ನರೇಂದ್ರ ಸ್ವಾಮಿ )**
ಕೃಷಿ ಸಚಿವರು